**ಕರ್ನಾಟಕ ಸರ್ಕಾರ**

'ಅತೀ ಜರೂರು'

ಸಂಖ್ಯೆ: ಪಪೂಶಿ/ಆಡಳಿತ(ಎ)/ಇತರೆ 1/2017-2018 ದಿನಾಂಕ: 15-03-2018

## <u>ಜ್ಞಾಪನ</u>

ವಿಷಯ:- ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಸೇವಾ ಮಾಹಿತಿಯನ್ನು ಕಾಲೇಜಿನ ಮುಖ್ಯಸ್ಥರು ಇಲಾಖೆಯ ವೆಬ್‌ಸೆಟ್‌ನಲ್ಲಿ ಅಪ್‌ಲೋಡ್ ಮಾಡುವ ಕುರಿತು.

******

ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಸೇವಾ ಮಾಹಿತಿಯು ಮುಂಬಡ್ತಿ, ಪರೀಕ್ಷಾ ಮೌಲ್ಯಮಾಪನ ಕಾರ್ಯಕ್ಕೆ ಹಾಗೂ ಇತರೆ ವಿಷಯಗಳಿಗೆ ಸಂಬಂಧಿಸಿದಂತೆ ಸೇವಾ ಮಾಹಿತಿಯು ತುರ್ತಾಗಿ ಅಗತ್ಯತೆ ಇರುತ್ತದೆ. **ಆದುದರಿಂದ ಸೇವೆಗೆ (ಉಪನ್ಯಾಸಕರ ಹುದ್ದೆಗೆ) ನೇಮಕಗೊಂಡ ದಿನಾಂಕದಿಂದ ಇಲ್ಲಿಯವರೆಗೆ ನಿಖರವಾದ ಮಾಹಿತಿಯನ್ನು ದಿನಾಂಕ: 22-03-2018 ರೊಳಗಾಗಿ ನಿಗಧಿತ ನಮೂನೆಯಲ್ಲಿ ಇಲಾಖೆಯ ವೆಬ್‌ಸೈಟ್‌ನಲ್ಲಿ ಅಪ್‌ಲೋಡ್ ಮಾಡುವ ಜವಾಬ್ದಾರಿಯು ಸಂಬಂಧಿಸಿದ ಕಾಲೇಜಿನ ಪ್ರಾಚಾರ್ಯರ ಜವಾಬ್ದಾರಿಯಾಗಿರುತ್ತದೆ. ನಮೂನೆಯನ್ನು ವೆಬ್‌ಸೆಟ್‌ನಲ್ಲಿ ಅಳವಡಿಸಲಾಗಿದೆ.** ಈ ಕುರಿತು ಆದ್ಯತೆ ಮೇಲೆ ತುರ್ತು ಕ್ರಮ ಕೈಗೊಳ್ಳಲು ಕಾಲೇಜಿನ ಮುಖ್ಯಸ್ಥರಿಗೆ ತಿಳಿಸಿದೆ.

ತಪ್ಪು ಮಾಹಿತಿ ಹಾಗೂ ಮಾಹಿತಿಯನ್ನು ಅಪ್‌ಲೋಡ್ ಮಾಡಲು ವಿಳಂಬ ನೀತಿ ಅನುಸರಿಸಿದ್ದಲ್ಲಿ ಸಂಬಂಧಿಸಿದ ಪ್ರಾಚಾರ್ಯರು ಮತ್ತು ಆಯಾ ಜಿಲ್ಲೆಯ ಉಪನಿರ್ದೇಶಕರನ್ನು ನೇರ ಹೊಣೆಗಾರರನ್ನಾಗಿ ಮಾಡಿ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುವುದು.

ಪ್ರಾಚಾರ್ಯರ ಮಾಹಿತಿಯನ್ನು ಸಹ upload ಮಾಡತಕ್ಕದ್ದು.

S.K. Sridha

ನಿರ್ದೇಶಕರ ಪರವಾಗಿ
ಪದವಿ ಪೂರ್ವ ಶಿಕ್ಷಣ ಇಲಾಖೆ.

ಪ್ರತಿಗಳು:-

1) ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆರವರು ಕಾಲೇಜಿನ ಮುಖ್ಯಸ್ಥರಿಗೆ ಸೂಚನೆ ನೀಡಿ ಸಕಾಲದಲ್ಲಿ ಮಾಹಿತಿಯನ್ನು ನೀಡಲು ಅಗತ್ಯ ಕ್ರಮ ವಹಿಸಲು ತಿಳಿಸಿದೆ.
2) ರಾಜ್ಯದ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ ಸೂಕ್ತ ಕ್ರಮಕ್ಕಾಗಿ.

NOTE:
USE II PUC ONLINE PORTAL LOGIN DETAILS FOR LECTURER / PRINCIPAL ENROLLMENT.

ಸೂ:- ಜಿಲ್ಲೆಯ ಎಲ್ಲಾ ಸರ್ಕಾರಿ ಪದವಿ ಪೂರ್ವ ಕಾಲೇಜು ಪ್ರಾಚಾರ್ಯರು ಈ ಕೂಡಲೇ ಮಾಹಿತಿಯನ್ನು ತಕ್ಷಣ ಅಪ್‌ಲೋಡ್ ಮಾಡುವುದು.

For ಉಪ ನಿರ್ದೇಶಕರು
ಪದವಿ ಪೂರ್ವ ಶಿಕ್ಷಣ ಇಲಾಖೆ
ದಕ್ಷಿಣ ಕನ್ನಡ ಜಿಲ್ಲೆ, ಮಂಗಳೂರು